ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಸದಸ್ಯರ ಹೆಸರು | : | ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 726 (851) |
| ಉತ್ತರಿಸುವ ಸಚಿವರು | : | ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 19-08-2025 |

*****

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಸಿಂಧನೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಸಿಂಧನೂರಿನಲ್ಲಿ ಜವಳಿ ಪಾರ್ಕ್ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕು ಶೈಕ್ಷಣಿಕವಾಗಿ ಹಾಗೂ ಆರ್ಥಿಕವಾಗಿ ಮುಂದುವರೆಯುತ್ತಿರುವ ತಾಲ್ಲೂಕು ಆಗಿದ್ದು, ತಾಲ್ಲೂಕಿನಲ್ಲಿ ಸುಮಾರು 4 ಲಕ್ಷ ಜನಸಂಖ್ಯೆಯನ್ನು ಹೊಂದಿದ್ದು ಸ್ಥಳೀಯ ಜನರಿಗೆ ಉದ್ಯೋಗ ಒದಗಿಸುವುದರೊಂದಿಗೆ ಅವರ ಜೀವನ ಮಟ್ಟ ಸುಧಾರಿಸುವ ದೃಷ್ಟಿಯಿಂದ ಜವಳಿ ಪಾರ್ಕ್ (Textile Park) ಸ್ಥಾಪಿಸುವಂತೆ ಇಲಾಖೆಗೆ ಮನವಿ ಸ್ವೀಕೃತವಾಗಿರುತ್ತದೆ. |
| (ಆ) | ಈ ಪಾರ್ಕ್ ನಿರ್ಮಾಣಕ್ಕೆ ಜಮೀನು ಗುರುತಿಸಲಾಗಿದೆಯೇ; | ಇಲ್ಲ. |
| (ಇ) | ಇದ್ದಲ್ಲಿ ಸರ್ಕಾರ ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು? | ಜವಳಿಪಾರ್ಕ್ (Textile Park) ಸ್ಥಾಪಿಸಲು ಅಗತ್ಯವಿರುವ ಕನಿಷ್ಠ 15 ಎಕರೆ ಸರ್ಕಾರಿ ಜಮೀನಿನನ್ನು ಗುರುತಿಸಿ ಇಲಾಖೆಯ ಹೆಸರಿಗೆ ಹಸ್ತಾಂತರಿಸಲು ತಹಶೀಲ್ದಾರರು, ಕಂದಾಯ ಇಲಾಖೆ, ಸಿಂಧನೂರು ತಾಲ್ಲೂಕು ಇವರಿಗೆ ದಿನಾಂಕ:10-07-2025 ರಂದು ಪತ್ರ ಬರೆಯಲಾಗಿದೆ. |

ಸಂಖ್ಯೆ: CI 181 JAKE 2025

(ಶಿವಾನಂದ ಎಸ್. ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು